# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 228 (211) |
| ವಿಧಾನ ಪರಿಷತ್ತಿನ ಸದಸ್ಯರು | : | ಶ್ರೀ ಎಸ್. ವ್ಹಿ. ಸಂಕನೂರ<br>(ಪದವೀಧರರ ಕ್ಷೇತ್ರ) |
| ಉತ್ತರಿಸುವವರು | : | ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ<br>ಮೂಲಸೌಲಭ್ಯ ಅಭಿವೃದ್ಧಿ ಸಚಿವರು |
| ಉತ್ತರಿಸುವ ದಿನಾಂಕ | : | 09.12.2025 |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಉತ್ತರ ಕರ್ನಾಟಕದ ವಿವಿಧ ಜಿಲ್ಲೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಹಾಗೂ ಮುಂಬರುವ ದಿನಗಳಲ್ಲಿ ಪ್ರಾರಂಭವಾಗಲಿರುವ ಬೃಹತ್ ಉದ್ದಿಮೆಗಳ ಸಂಖ್ಯೆ ಎಷ್ಟು; ಮತ್ತು ಅವುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು; (ವಿಭಾಗವಾರು ಹಾಗೂ ಜಿಲ್ಲಾವಾರು ಮಾಹಿತಿ ನೀಡುವುದು); | ಉತ್ತರ ಕರ್ನಾಟಕ ಜಿಲ್ಲೆಗಳಲ್ಲಿ 2013-14 ರಿಂದ ಅಕ್ಟೋಬರ್ - 2025ರ ಅಂತ್ಯದವರೆಗೆ ರಾಜ್ಯ ಉನ್ನತ ಮಟ್ಟದ ಒಪ್ಪಿಗೆ ನೀಡಿಕೆ ಸಮಿತಿ ಹಾಗೂ ರಾಜ್ಯ ಮಟ್ಟದ ಏಕಗವಾಕ್ಷಿ ಅನುಮೋದನಾ ಸಮಿತಿ ಸಭೆಗಳಲ್ಲಿ ಒಟ್ಟು 954 ಯೋಜನೆಗಳಿಗೆ ಅನುಮೋದನೆ ನೀಡಲಾಗಿದ್ದು, ಇವುಗಳಿಂದ ರೂ. 3,30,984 ಕೋಟಿ ಮೊತ್ತದ ಬಂಡವಾಳ ಹೂಡಿಕೆ ಮತ್ತು 3,02,607 ಉದ್ಯೋಗಾವಕಾಶಗಳನ್ನು ನಿರೀಕ್ಷಿಸಲಾಗಿದೆ.<br><br>ಇವುಗಳ ಪೈಕಿ 203 ಯೋಜನೆಗಳು ಅನುಷ್ಠಾನಗೊಂಡಿದ್ದು, ಇವುಗಳಿಂದ ರೂ. 1,00,489 ಕೋಟಿ ಮೊತ್ತದ ಬಂಡವಾಳ ಹೂಡಿಕೆಯಾಗಿದೆ ಹಾಗೂ 97,715 ಉದ್ಯೋಗ ಸೃಜನೆಯಾಗಿದೆ. ಅನುಮೋದನೆಯಾದ ಯೋಜನೆಗಳ ಪೈಕಿ 61 ಯೋಜನೆಗಳು ಅನುಷ್ಠಾನದಿಂದ ಹಿಂದೆ ಸರಿದಿರುತ್ತವೆ. ಉಳಿದ 690 ಯೋಜನೆಗಳು ವಿವಿಧ ಅನುಷ್ಠಾನ ಹಂತಗಳಲ್ಲಿರುತ್ತವೆ. |
| ಆ | ಉತ್ತರ ಕರ್ನಾಟಕ ಹೊರತು ಪಡಿಸಿ ಉಳಿದ ಮಧ್ಯ ಕರ್ನಾಟಕ, ಮೈಸೂರು ಮತ್ತು ಬೆಂಗಳೂರು ವಿಭಾಗಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಹಾಗೂ ಮುಂಬರುವ ದಿನಗಳಲ್ಲಿ ಪ್ರಾರಂಭವಾಗಲಿರುವ ಬೃಹತ್ ಉದ್ದಿಮೆಗಳ ಸಂಖ್ಯೆ ಎಷ್ಟು; ಮತ್ತು ಅವುಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಸಿಬ್ಬಂದಿ ಎಷ್ಟು? | ದಕ್ಷಿಣ ಕರ್ನಾಟಕ ಮತ್ತು ಕರಾವಳಿ ಜಿಲ್ಲೆಗಳಲ್ಲಿ 2013-14 ರಿಂದ ಅಕ್ಟೋಬರ್-2025 ರ ಅಂತ್ಯದವರೆಗೆ ರಾಜ್ಯ ಉನ್ನತ ಮಟ್ಟದ ಒಪ್ಪಿಗೆ ನೀಡಿಕೆ ಸಮಿತಿ ಹಾಗೂ ರಾಜ್ಯ ಮಟ್ಟದ ಏಕಗವಾಕ್ಷಿ ಅನುಮೋದನಾ ಸಮಿತಿ ಸಭೆಗಳಲ್ಲಿ ಒಟ್ಟು 3469 ಯೋಜನೆಗಳಿಗೆ ಅನುಮೋದನೆ ನೀಡಲಾಗಿದ್ದು, ಇವುಗಳಿಂದ ರೂ. 5,95,755 ಕೋಟಿ ಮೊತ್ತದ ಬಂಡವಾಳ ಹೂಡಿಕೆ ಮತ್ತು 17,53,505 ಉದ್ಯೋಗಾವಕಾಶಗಳನ್ನು ನಿರೀಕ್ಷಿಸಲಾಗಿದೆ. |

| | | |
|---|---|---|
| | | ಇವುಗಳ ಪೈಕಿ 494 ಯೋಜನೆಗಳು ಅನುಷ್ಠಾನಗೊಂಡಿದ್ದು, ಇವುಗಳಿಂದ ರೂ. 1,17,413 ಕೋಟಿ ಮೊತ್ತದ ಬಂಡವಾಳ ಹೂಡಿಕೆಯಾಗಿದೆ ಹಾಗೂ 3,99,107 ಉದ್ಯೋಗ ಸೃಜನೆಯಾಗಿದೆ.<br><br>ಅನುಮೋದನೆಯಾದ ಯೋಜನೆಗಳ ಪೈಕಿ 317 ಯೋಜನೆಗಳು ಅನುಷ್ಠಾನದಿಂದ ಹಿಂದೆ ಸರಿದಿರುತ್ತವೆ. ಉಳಿದ 2658 ಯೋಜನೆಗಳು ವಿವಿಧ ಅನುಷ್ಠಾನ ಹಂತಗಳಲ್ಲಿರುತ್ತವೆ. |

ಸಿಐ 345 ಎಸ್‌ಪಿಐ 2025

**(ಎಂ.ಬಿ.ಪಾಟೀಲ)**
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಮೂಲಸೌಲಭ್ಯ ಅಭಿವೃದ್ಧಿ ಸಚಿವರು